# Akashvani : Bangalore

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**16.04.2024 / 18.40 hrs**

<u>ಮುಖ್ಯಾಂಶಗಳು</u>

೧. ರಾಜ್ಯದ ೧೮ ಜಿಲ್ಲೆಗಳಲ್ಲಿ ಭಾರೀ ಮಳೆ ಹವಾಮಾನ ಇಲಾಖೆ ಮುನ್ಸೂಚನೆ

೨. ಇದೇ ೧೯ ರಂದು ಮೊದಲ ಹಂತದ ಲೋಕಸಭಾ ಚುನಾವಣೆ ; ಬಹಿರಂಗ ಪ್ರಚಾರ ನಾಳೆ ಅಂತ್ಯ

೩. ಜಿಲ್ಲೆಗಳಲ್ಲಿ ತೀವ್ರಗೊಂಡ ಮತದಾರರ ಜಾಗೃತಿ ಕಾರ್ಯಕ್ರಮ

೪. ಸಮುದ್ರದಲ್ಲಿ ಸಂಕಷ್ಟಕ್ಕೆ ಸಿಲುಕಿದ್ದ ಮೀನುಗಾರರ ದೋಣಿ ರಕ್ಷಿಸಿದ ಕಡಲುಪಡೆ

<><*<><>*><>

ರಾಜ್ಯದ ೧೮ ಜಿಲ್ಲೆಗಳಲ್ಲಿ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮುನ್ಸೂಚನೆಯಂತೆ ಮುಂದಿನ ೨೪ ಗಂಟೆಗಳಲ್ಲಿ ಬಾಗಲಕೋಟೆ, ಬೆಳಗಾವಿ, ಬೀದರ್, ಧಾರವಾಡ, ಗದಗ, ಕೊಪ್ಪಳ, ರಾಯಚೂರು, ವಿಜಯಪುರ, ಯಾದಗಿರಿ, ಚಾಮರಾಜನಗರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಕೊಡಗು, ಮಂಡ್ಯ, ಮೈಸೂರು, ರಾಮನಗರ, ತುಮಕೂರು ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ. ರಾಜ್ಯಾದ್ಯಂತ ಒಣಹವೆ ಮುಂದುವರೆದಿದೆ. ಕಲಬುರಗಿಯಲ್ಲಿ ದಿನದ ಗರಿಷ್ಠ ೪೦.೮ ಡಿಗ್ರಿ ಸೆಲ್ಸಿಯೆಸ್ ತಾಪಮಾನ ದಾಖಲಾಗಿದೆ. ಬೆಂಗಳೂರು ಸುತ್ತಮುತ್ತ ಶುಭ್ರ ಆಕಾಶ, ಗರಿಷ್ಠ ೩೭, ಕನಿಷ್ಠ ೨೨ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

<><*<><>*><>

ಇದೇ ೧೯ ರಂದು ೧೦೨ ಲೋಕಸಭಾ ಕ್ಷೇತ್ರಗಳಿಗೆ ಮೊದಲನೇ ಹಂತದ ಮತದಾನ ನಡೆಯಲಿದ್ದು, ಬಹಿರಂಗ ಪ್ರಚಾರ ನಾಳೆ ಅಂತ್ಯವಾಗಲಿದೆ. ೨೧ ರಾಜ್ಯಗಳಲ್ಲಿ ಮತದಾನ ನಡೆಯಲಿದೆ. ಮಹಾರಾಷ್ಟ್ರ ಮತ್ತು ಛತ್ತೀಸ್‌ಘಡ ನಕ್ಸಲ್ ಪ್ರದೇಶಗಳಲ್ಲಿ ಬಿಗಿ ಭದ್ರತೆ ಕಲ್ಪಿಸಲಾಗಿದೆ. ಬಿಹಾರ, ಮಧ್ಯಪ್ರದೇಶ, ರಾಜಸ್ಥಾನ, ಜಮ್ಮು-ಕಾಶ್ಮೀರ, ಉತ್ತರಪ್ರದೇಶ, ಪಶ್ಚಿಮ ಬಂಗಾಳ ಸೇರಿದಂತೆ ೨೧ ರಾಜ್ಯಗಳಲ್ಲಿ ಚುನಾವಣೆ ನಡೆಯಲಿದೆ. ವಿವಿಧ ರಾಜಕೀಯ ಪಕ್ಷಗಳ ನಾಯಕರು ಅಬ್ಬರದ ಪ್ರಚಾರದಲ್ಲಿ ನಿರತರಾಗಿದ್ದಾರೆ. ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ಬಿಹಾರದ ಗಯಾದಲ್ಲಿ ಹಾಗೂ ಕಾಂಗ್ರೆಸ್ ಹಿರಿಯ ಮುಖಂಡ ರಾಹುಲ್ ಗಾಂಧಿ ಕೇರಳದಲ್ಲಿ ಬಿರುಸಿನ ಪ್ರಚಾರ ನಡೆಸಿದ್ದಾರೆ.

<><*<><>*><>

ಇದೇ ೨೬ರಂದು ರಾಜ್ಯದ ೧೪ ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದ್ದು, ಜಿಲ್ಲೆಗಳಲ್ಲಿ ಮತದಾರರ ಜಾಗೃತಿ ಕಾರ್ಯಕ್ರಮ ಹಾಗೂ ಪ್ರಚಾರ ಕಾರ್ಯ ಚುರುಕುಗೊಂಡಿದೆ. ಎರಡನೇ ಹಂತದ ಚುನಾವಣೆಗೆ ನಾಮಪತ್ರ ಸಲ್ಲಿಕೆ ಕಾರ್ಯ ಸಹ ಬಿರುಸುಗೊಂಡಿದೆ. ನಿನ್ನೆಯವರೆಗೆ ೮೮ ಅಭ್ಯರ್ಥಿಗಳಿಂದ ೧೨೬ ಉಮೇದುವಾರಿಕೆ ಸಲ್ಲಿಕೆಯಾಗಿದೆ. ಎರಡನೇ ಹಂತದ ಚುನಾವಣೆಗೆ ಇದೇ ೧೨ರಂದು ಅಧಿಸೂಚನೆ ಹೊರಡಿಸಲಾಗಿತ್ತು. ದಕ್ಷಿಣ ಕನ್ನಡ ಜಿಲ್ಲೆಯ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾನ ಜಾಗೃತಿ ಕಾರ್ಯಕ್ರಮ ನಡೆಯುತ್ತಿದೆ. ೨೦೧೯ರ ಚುನಾವಣೆಯಲ್ಲಿ ಶೇಕಡ ೭೭.೯೦ ಮತದಾನ ದಾಖಲಿಸಿದ್ದ ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದಲ್ಲಿ ಈ ಬಾರಿ ಶೇಕಡ ನೂರರ ಗುರಿಯೊಂದಿಗೆ ಜಾಗೃತಿ ಕಾರ್ಯ ಮುಂದುವರೆದಿದೆ. ಇಂದು ಮಂಗಳೂರಿನ ವಿವಿಧೆಡೆ ಮತದಾನ ಜಾಗೃತಿ ಕಾರ್ಯಕ್ರಮ ನಡೆಯಿತು. ನಗರದ ಪಡೀಲ್‌ನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮತ್ತು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಡಾ. ಕೆ. ಆನಂದ್ ಎಲ್ಲರನ್ನು ಒಳಗೊಳ್ಳುವ ರಾಷ್ಟ್ರ ನಿರ್ಮಾಣ ಮಾಡುವುದು ಸಂವಿಧಾನದ ಆಶಯವಾಗಿದೆ. ಈ ನಿಟ್ಟಿನಲ್ಲಿ ಎಲ್ಲರಿಗೂ ಸಮಾನ ಮತದಾನ ಹಕ್ಕು ಕಲ್ಪಿಸಲಾಗಿದೆ. ಪ್ರತಿಯೊಬ್ಬ ಮತದಾರ ತನ್ನ ಜವಾಬ್ದಾರಿ ಮರೆಯದೆ ಇದೇ ೨೬ ರಂದು ನಡೆಯುವ ಚುನಾವಣೆಯಲ್ಲಿ ಮತ ಚಲಾಯಿಸಬೇಕು ಎಂದರು. ಬೆಳಗಾವಿಯಲ್ಲಿ ಹಮ್ಮಿಕೊಂಡಿದ್ದ ಮತದಾನ ಜಾಗೃತಿ, ಕಾಲ್ನಡಿಗೆ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ರಾಹುಲ್ ಶಿಂಧೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಸಾರ್ವತ್ರಿಕ ಚುನಾವಣೆಯಲ್ಲಿ ಎಲ್ಲ ಮತದಾರರು ಕಡ್ಡಾಯವಾಗಿ ಮತ ಚಲಾಯಿಸಬೇಕು ಎಂದು ಮನವಿ ಮಾಡಿದರು. ಬಾಗಲಕೋಟೆಯಲ್ಲಿ ಜಿಲ್ಲಾಧಿಕಾರಿ ಕೆ.ಎಂ. ಜಾನಕಿ ಮಾತನಾಡಿ, ಪ್ರತಿಯೊಬ್ಬರೂ ಮತದಾನ ಮಾಡುವ ಮೂಲಕ ಪ್ರಜಾಪ್ರಭುತ್ವದ ಹಬ್ಬದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಹಮ್ಮಿಕೊಂಡಿದ್ದ ಮತದಾರರ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಅವರು ಮಾತನಾಡಿದರು. ಜಿಲ್ಲೆಯಲ್ಲಿ ಮೇ ೭ ರಂದು ಚುನಾವಣೆ ನಡೆಯಲಿದ್ದು, ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸಲು ಹಾಗೂ ಜನರಲ್ಲಿ ಜಾಗೃತಿ ಮೂಡಿಸಲು ಸ್ವೀಪ್ ಸಮಿತಿ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿವೆ ಎಂದು

ಹೇಳಿದರು. ಜಿಲ್ಲಾಡಳಿತದಿಂದ ಆರಂಭವಾದ ಮ್ಯಾರಥಾನ್ ಜಿಲ್ಲಾ ಕ್ರೀಡಾಂಗಣದಲ್ಲಿ ಮುಕ್ತಾಯವಾಯಿತು. ಮಾರ್ಗದ ಉದ್ದಕ್ಕೂ ಮತದಾನದ ಮಹತ್ವ ಸಾರುವ ಘೋಷಣೆ ಮೊಳಗಿಸಲಾಯಿತು. ನಂತರ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಹಾಸನ ಜಿಲ್ಲೆಯಲ್ಲಿ ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಗೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಸಿ. ಸತ್ಯಭಾಮ ಹೇಳಿದ್ದಾರೆ.  ಹಾಸನದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲಿ ೧೭ ಲಕ್ಷ ೩೬ ಸಾವಿರದ ೬೧೦ ಮತದಾರರಿದ್ದಾರೆ. ಒಟ್ಟು ೨ ಸಾವಿರಕ್ಕೂ ಹೆಚ್ಚು ಮತಗಟ್ಟೆಗಳನ್ನು ತೆರೆಯಲಾಗಿದೆ. ಮತದಾರರ ಭಾವಚಿತ್ರವಿರುವ ಗುರುತಿನ ಚೀಟಿ ಇಲ್ಲದವರು ಆಯೋಗ ನಿಗದಿಪಡಿಸಿರುವ ದಾಖಲೆಗಳ ಪೈಕಿ ಯಾವುದಾದರೂ ಒಂದನ್ನು ತೋರಿಸಿ ಮತ ಚಲಾಯಿಸಬಹುದು ಎಂದು ಹೇಳಿದರು.

ಕೋಲಾರ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಶ್ರೀನಿವಾಸ ಪುರ ತಾಲೂಕಿನಲ್ಲಿ ಮನೆಗೊಂದು ಮರ, ದೇಶಕ್ಕೊಂದು ನಿಮ್ಮ ನೈತಿಕ ಮತ ಅಭಿಯಾನದಡಿ ಜಾಗೃತಿ ಕಾರ್ಯಕ್ರಮ ನಡೆಯಿತು. ಗ್ರಾಮದ ಪ್ರಮುಖ ಬೀದಿಗಳಲ್ಲಿ ಜಾಥಾ ಮೂಲಕ ಮನೆ ಮನೆಗೆ ಭೇಟಿ ನೀಡಿ ಗಿಡ ನೀಡುವುದರ ಮೂಲಕ ಕಡ್ಡಾಯ ಮತದಾನದ ಅರಿವು ಮೂಡಿಸಲಾಯಿತು. ಗದಗದಲ್ಲಿಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ವಿವಿಧ ಸಂಘ ಸಂಸ್ಥೆಗಳ ಆಶ್ರಯದಲ್ಲಿ ಮತದಾರರ ಜಾಗೃತಿ ಜಾಥಾ ನಡೆಯಿತು. ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಿಂದ ಸ್ವೀಪ್ ಸಮಿತಿ ಅಧ್ಯಕ್ಷ ಭರತ್ ಎಸ್. ಸೈಕಲ್ ಸವಾರಿ ಮೂಲಕ ಜಾಗೃತಿ ಜಾಥಾಗೆ ಚಾಲನೆ ನೀಡಿದರು. ಮೇ ೭ ರಂದು ನಡೆಯುವ ಚುನಾವಣೆಯಂದು ಎಲ್ಲ ಅರ್ಹ ಮತದಾರರು ಕಡ್ಡಾಯವಾಗಿ ಮತ ಚಲಾಯಿಸಬೇಕು ಎಂದು ಹೇಳಿದರು. ಗದಗದಲ್ಲಿ ಜಿಲ್ಲಾಧಿಕಾರಿ ಎಂ.ಎಲ್. ವೈಶಾಲಿ, ಚುನಾವಣಾ ಕರ್ತವ್ಯದಿಂದ ಗೈರು ಹಾಜರಾಗುವ ಸಿಬ್ಬಂದಿಗಳ ವಿರುದ್ಧ ಶಿಸ್ತುಕ್ರಮ ಜರುಗಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ದಾವಣಗೆರೆ ಜಿಲ್ಲೆಯಲ್ಲಿ ಮತದಾರರನ್ನು ಆಕರ್ಷಿಸಲು ಲೋಕಸಭಾ ಕ್ಷೇತ್ರದಲ್ಲಿ ೬೦ಕ್ಕೂ ಅಧಿಕ ವಿಶೇಷ ಮತಗಟ್ಟೆಗಳನ್ನು  ಸ್ಥಾಪಿಸಲಾಗಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಸುರೇಶ್ ಇಟ್ನಾಳ್ ಹೇಳಿದ್ದಾರೆ. ನಂತರ ಮಾತನಾಡಿದ ಅವರು, ಯುವ ಮತಗಟ್ಟೆ, ಸಖಿ, ವಿಶೇಷಚೇತನರು, ಸಾಂಪ್ರದಾಯಿಕ, ವಿಷಯಾಧಾರಿತ ಸೇರಿದಂತೆ ೬೦ಕ್ಕೂ ಅಧಿಕ ವಿಶೇಷ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಇದರೊಂದಿಗೆ ಸಾಂಸ್ಕೃತಿಕ, ಜಾನಪದ ಕಾರ್ಯಕ್ರಮ, ಚರ್ಚಾಸ್ಪರ್ಧೆ, ಗುಂಪು ಚರ್ಚೆ, ಮನೆ ಮನೆ ಭೇಟಿ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಎಂದು ಹೇಳಿದರು. ಉತ್ತರ ಕನ್ನಡ ಲೋಕಸಭಾ ಕ್ಷೇತ್ರಕ್ಕೆ ಕಾಂಗ್ರೆಸ್ ಅಭ್ಯರ್ಥಿಯಾಗಿ ಡಾ. ಅಂಜಲಿ ನಿಂಬಾಳ್ಕರ್ ಇಂದು ನಾಮಪತ್ರ ಸಲ್ಲಿಸಿದರು.  ಯಾದಗಿರಿ ಜಿಲ್ಲೆಯ ಶೋರಾಪುರ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಕಾಂಗ್ರೆಸ್ ಅಭ್ಯರ್ಥಿ ರಾಜಾ ವೇಣುಗೋಪಾಲ್ ನಾಯಕ್ ಇಂದು ನಾಮಪತ್ರ ಸಲ್ಲಿಸಿದರು. ಧಾರವಾಡ ಲೋಕಸಭಾ ಮತಕ್ಷೇತ್ರದ ಸಾರ್ವತ್ರಿಕ ಚುನಾವಣೆಗೆ ಮತದಾನ ನಡೆಯುವ ಮೇ ೭ ರಂದು ಹಾಗೂ ಮತ ಎಣಿಕೆ ನಡೆಯುವ ಜೂನ್ ೪ ರಂದು ಧಾರವಾಡ ಜಿಲ್ಲೆಯಾದ್ಯಂತ ಮದ್ಯಪಾನ, ಮದ್ಯ ಮಾರಾಟ, ಮದ್ಯ ಸಾಗಾಣಿಕೆಯನ್ನು ಮತ್ತು ಮದ್ಯ ಸಂಗ್ರಹಣೆಯನ್ನು ನಿಷೇಧಿಸಿ, ಜಿಲ್ಲಾಧಿಕಾರಿ ದಿವ್ಯ ಪ್ರಭು ಆದೇಶ ಹೊರಡಿಸಿದ್ದಾರೆ. ರಾಜ್ಯದಲ್ಲಿ ಇದೇ ೨೬ ಮತ್ತು ಮೇ ೭ ರಂದು ನಡೆಯಲಿರುವ ೨೮ ಲೋಕಸಭಾ ಚುನಾವಣೆ ಹಾಗೂ ಶೋರಾಪುರ ವಿಧಾನಸಭೆಗೆ ಮತದಾನ ನಡೆಯುವ ದಿನದಂದು ಚುನಾವಣಾ ಆಯೋಗ ವೇತನ ಸಹಿತ ಸಾರ್ವತ್ರಿಕ ರಜೆ ಘೋಷಿಸಿದೆ.

**<><*<><>*><>**

ಮತದಾರರು ಮತಗಟ್ಟೆಗಳನ್ನು ಸುಲಭವಾಗಿ ಹುಡಕಲು ಅನುಕೂಲವಾಗುವಂತೆ ಮನೆ ಮನೆಗೆ ಹಂಚುವ ವೋಟ್ ಸ್ಲಿಪ್‌ಗಳಲ್ಲಿ ಇದೇ ಮೊದಲ ಬಾರಿಗೆ ಮತಗಟ್ಟೆಯ ಕ್ಯೂಆರ್ ಕೋಡ್ ಮುದ್ರಿಸಲಾಗಿದೆ. ಬೆಂಗಳೂರು ಸೇರಿದಂತೆ ರಾಜ್ಯದ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಈ ಸೌಲಭ್ಯ ಕಲ್ಪಿಸಿಕೊಡಲಾಗಿದೆ. ಮತ ಕೇಂದ್ರ ದಿನಾಂಕ, ಸಮಯ ಮುಂತಾದ ಮಾಹಿತಿಯನ್ನು ಕ್ಯೂಆರ್ ಕೋಡ್ ಒಳಗೊಂಡಿರುತ್ತದೆ. ಈ ನಡುವೆ ಭಾವಚಿತ್ರವಿರುವ ಗುರುತಿನ ಚೀಟಿ ಇಲ್ಲದೇ ಹೋದಲ್ಲಿ ಆಯೋಗ ನಿಗದಿಪಡಿಸಿರುವ ಈ ಕೆಳಕಂಡ ದಾಖಲೆಗಳ ಪೈಕಿ ಯಾವುದಾದರೂ ಒಂದನ್ನು ತೋರಿಸಿ ಮತ ಚಲಾಯಿಸಬಹುದಾಗಿದೆ. ಆಧಾರ್ ಕಾರ್ಡ್, ಮನ್ರೇಗಾ ಜಾಬ್ ಕಾರ್ಡ್, ಬ್ಯಾಂಕ್, ಪೋಸ್ಟ್ ಆಫೀಸ್ ನೀಡಿರುವ ಭಾವಚಿತ್ರವಿರುವ ಪಾಸ್‌ಬುಕ್, ಭಾರತೀಯ ಪಾಸ್‌ಪೋರ್ಟ್ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು, ಉದ್ಯೋಗಿಗಳಿಗೆ ನೀಡಿರುವ ಭಾವಚಿತ್ರ ಹೊಂದಿರುವ ಸೇವಾ ಗುರುತಿನ ಚೀಟಿ, ವಿಶಿಷ್ಟ ಅಂಗವೈಕಲ್ಯ ಕಾರ್ಡ್ ಇವುಗಳನ್ನು ತೋರಿಸಿ ಮತ ಹಾಕಲು ಚುನಾವಣಾ ಆಯೋಗ ಅವಕಾಶ ಕಲ್ಪಿಸಿಕೊಟ್ಟಿದೆ.

**<><*<><>*><>**

ಈಗ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ವಿವರಗಳು :

ವರದಿಯನ್ನು ಸಿದ್ಧಪಡಿಸಿರುವವರು : ನಮ್ಮ ಜಿಲ್ಲಾ ಪ್ರತಿನಿಧಿ ಚನ್ನಬಸವಯ್ಯ

ಚಿತ್ರದುರ್ಗ ಲೋಕಸಬಾ ಕ್ಷೇತ್ರದ ವ್ಯಾಪ್ತಿಗೆ ೮ ವಿಧಾನಸಭಾ ಕ್ಶೇತ್ರಗಳು ಮತ್ತು ತುಮಕೂರು ಜಿಲ್ಲೆಯ ೨ ವಿಧಾನಸಭಾ ಕ್ಷೇತ್ರಗಳು ಸೇರಿವೆ.

ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ, ಹೊಳಲ್ಕೆರೆ ಚಿತ್ರದುರ್ಗ ಚಳ್ಳಕೆರೆ, ಮೊಳಕಾಲ್ಮೂರು ಮತ್ತು ಹಿರಿಯೂರು ವಿಧಾನಸಭಾ ಕ್ಷೇತ್ರಗಳು ತುಮಕೂರು ಜಿಲ್ಲೆಯ ಶಿರಾ ಮತ್ತು ಪಾವಗಡ ಕ್ಷೇತ್ರಗಳು ವ್ಯಾಪ್ತಿಗೆ ಸೇರಿವೆ. ಒಟ್ಟು ೮ ವಿಧಾನಸಭಾ ಕ್ಷೇತ್ರಗಳಲ್ಲಿ ೪ ಮೀಸಲು ೪ ಸಾಮಾನ್ಯ ಕ್ಷೇತ್ರಗಳಾಗಿವೆ.

ಲೋಕಸಭಾ ವ್ಯಾಪ್ತಿಗೆ ಬರುವ ೦೮ ವಿಧಾನಸಭಾ ಕ್ಷೇತ್ರಗಳಿಂದ ಜಿಲ್ಲೆಯಲ್ಲಿ ಒಟ್ಟು ೧೪ ಲಕ್ಷ ೧೮ ಸಾವಿರದ ೨೧೧ ಮತದಾರರು ಇದ್ದಾರೆ. ೭ ಲಕ್ಷ ೦೪ ಸಾವಿರದ ೮೯೬ ಪುರುಷ ಮತದಾರರು, ೭ ಲಕ್ಷ ೧೩ ಸಾವಿರದ ೨೨೮ ಮಹಿಳಾ ಮತದಾರರು ಹಾಗೂ ೯೫ ಮಂದಿ ಇತರೆ ಮತದಾರರು ಇದ್ದಾರೆ.

ಚಿತ್ರದುರ್ಗ ಜಿಲ್ಲೆಯು ಸಾಂಪ್ರದಾಯಿಕವಾಗಿ ಕಾಂಗ್ರೆಸ್ ಬೆಂಬಲಿಸುತ್ತಾ ಬಂದಿದೆ. ೧೯೫೨ರಿಂದ ೨೦೧೯ವರೆಗೂ ನಡೆದ ೧೭ ಲೋಕಸಭಾ ಚುನಾವಣೆಯಲ್ಲಿ ೧೨ಕ್ಕೂ ಹೆಚ್ಚುಬಾರಿ ಕಾಂಗ್ರೆಸ್ ಜಯಭೇರಿ ಬಾರಿಸಿದೆ.

೧೯೯೯ರಲ್ಲಿ ಶಶಿಕುಮಾರ್ ಜನತಾದಳ ಯುನೈಟೆಡ್, ೨೦೦೯ರಲ್ಲಿ ಬಿಜೆಪಿಯ ಜನಾರ್ಧನ ಸ್ವಾಮಿ, ೨೦೧೯ರಲ್ಲಿ ಮತ್ತೆ ಬಾಜಪಾದ ಎ, ನಾರಾಯಣಸ್ವಾಮಿಗೆ ಚಿತ್ರದುರ್ಗ ಜನತೆ ಮಣೆ ಹಾಕಿದ್ದಾರೆ.

೨೦೨೪ರ ಲೋಕಸಭಾ ಕಣದಲ್ಲಿ ಪ್ರಮುಖ ರಾಜಕೀಯ ಪಕ್ಷಗಳನ್ನು ಒಳಗೊಂಡು ೨೦ ಮಂದಿ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಭಾರತೀಯ ಜನತಾ ಪಕ್ಷದ ಗೋವಿಂದ ಕಾರಜೋಳ ಮತ್ತು ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಚಂದ್ರಪ್ಪ ನಡುವೆ ನೇರ ಸ್ಪರ್ದೆ ಏರ್ಪಟ್ಟಿದೆ. ಉಳಿದ ೧೮ ರಾಜ್ಯ ಮಟ್ಟದ ರಾಜಕೀಯಪಕ್ಷಗಳು ಸ್ವತಂತ್ರ ಅಭ್ಯರ್ಥಿಗಳು ಕಣದಲ್ಲಿದ್ದಾರೆ.

೦೮ ವಿಧಾನಸಭಾ ಕ್ಷೇತ್ರಗಳಲ್ಲಿ ೦೭ರಲ್ಲಿ ಕಾಂಗ್ರೆಸ್ ಪಕ್ಷದ ವಿಧಾನ ಸಭಾ ಸದಸ್ಯರಿದ್ದಾರೆ,ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಚಂದ್ರಪ್ಪ ಸರಕಾರ ನೀಡಿರುವ ಜನಪರ ಯೋಜನೆಗಳನ್ನು ಪ್ರಸ್ತಾಪಿಸಿ ಚುನಾವಣೆಯಲ್ಲಿ ಪ್ರಚಾರ ಮಾಡಿದ್ದಾರೆ.

ಬಾರತೀಯ ಜನತಾ ಪಕ್ಷದ ಅಭ್ಯರ್ಥಿ ಪರ ೧ ವಿಧಾನಸಭಾ ಸದಸ್ಯ ಮತ್ತು ೦೩ ವಿಧಾನ ಪರಿಷತ್ ಸದಸ್ಯರ ಬಲವಿದೆ. ಜಿಲ್ಲೆಯಲ್ಲಿ ಉತ್ತಮ ಸಂಘಟನೆ ಬಾಜಪಾ ಹೊಂದಿದೆ,ಕೇಂದ್ರ ಸರಕಾರ ಜಿಲ್ಲೆಗೆ ನೀಡಿರುವ ಯೋಜನೆಗಳು ಮತ್ತು ಕೇಂದ್ರ ಸರಕಾರದ ಜನಪರ ಯೋಜನೆಗಳು ಚುನಾವಣೆಗೆ ಸಹಕಾರಿಯಾಗಲಿವೆ.

೨೦೧೯ರ ಲೋಕಸಭಾ ಚುನಾವಣೆಯಲ್ಲಿ ಭಾಜಾಪಾದ ನಾರಾಯಣಸ್ವಾಮಿ ಶೇಕಡ ೫೦ರಲ್ಲಿ ೬ ಲಕ್ಷ ೨೬ ಸಾವಿರದ ೧೯೫ ಮತಗಳನ್ನು ಪಡೆದರೆ ಕಾಂಗ್ರೆಸ್ಸಿನಿಂದ ಸ್ಪರ್ಧಿಸಿದ್ದ ಚಂದ್ರಪ್ಪ ಶೇಕಡ ೪೩.೦೮ ದಲ್ಲಿ ೫ ಲಕ್ಷ ೪೬ ಸಾವಿರದ ೧೭ ಮತ ಪಡೆದಿದ್ದರು. ಬಿಜೆಪಿಯ ನಾರಾಯಣಸ್ವಾಮಿ ೮೦ ಸಾವಿರ ಮತದ ಅಂತರದಿಂದ ಜಯಶೀಲರಾಗಿದ್ದರು.

ಪ್ರತಿ ಚುನಾವಣೆಯಲ್ಲೂ ಅಚ್ಚರಿಯ ಫಲಿತಾಂಶವನ್ನು ನೀಡುತ್ತಾ ಬಂದಿರುವ ಚಿತ್ರದುರ್ಗದ ಜನತೆಯು ೨೦೨೪ರಲ್ಲಿ ಯಾರನ್ನು ಲೋಕಸಭೆಗೆ ಕಳುಹಿಸಲಿದ್ದಾರೆ ಎನ್ನೋದು ಮತಎಣಿಕೆ ನಂತರ ಗೊತ್ತಾಗಲಿದೆ.

**<><*<><>*><>**

ಕಾರವಾರದಿಂದ ೨೧೫ ನಾಟಿಕಲ್ ಮೈಲಿ ಅಂತರದ ಸಮುದ್ರದಲ್ಲಿ ಇಂಜಿನ್ ವೈಫಲ್ಯದಿಂದ ಸಂಕಷ್ಟಕ್ಕೆ ಸಿಲುಕಿದ್ದ ಭಾರತೀಯ ಮೀನುಗಾರರ ದೋಣಿಯನ್ನು ಕಡಲುಪಡೆ ಸಿಬ್ಬಂದಿ ರಕ್ಷಿಸಿದೆ. ಈ ಘಟನೆ ಇದೇ ೧೩ರಂದು ಸಂಭವಿಸಿದ್ದು, ಈ ಕುರಿತು ರಕ್ಷಣಾ ಇಲಾಖೆಯ ಸಾರ್ವಜನಿಕ ಸಂಪರ್ಕ ಕಚೇರಿ ಪ್ರಕಟಣೆಯಲ್ಲಿ ಈ ವಿಷಯ ತಿಳಿಸಿದೆ. ಐಸಿಜಿಎಸ್ ಸಾವಿತ್ರಿಬಾಯಿ ಪುಲೆ ಹಡಗಿನಲ್ಲಿ ಪಹರೆಯಲ್ಲಿದ್ದ ಸಿಬ್ಬಂದಿ ತಕ್ಷಣ ಸ್ಪಂದಿಸಿ ಸಂಕಷ್ಟದಲ್ಲಿದ್ದ ಮೀನುಗಾರರನ್ನು ಕಾಪಾಡಿದ್ದಾರೆ. ಐಎಫ್‌ಬಿ ರೋಸರಿ ಮೀನುಗಾರರ ಹಡಗಿನಲ್ಲಿ ಸಂಕಷ್ಟಕ್ಕೆ ಸಿಲುಕಿಕೊಂಡಿದ್ದ ಮೀನುಗಾರರು ಮತ್ತು ಹಡಗನ್ನು ಸುರಕ್ಷಿತವಾಗಿ ಕಾರವಾರ ಬಂದರಿಗೆ ಕರೆ ತರಲಾಗಿದೆ ಎಂದು ರಕ್ಷಣಾ ಇಲಾಖೆಯ ಪ್ರಕಟಣೆ ತಿಳಿಸಿದೆ.

**<><*<><>*><>**

ಬೇಸಿಗೆಯ ಬಿಸಿಲ ತಾಪದಿಂದ ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆ ತಲೆದೋರಿದೆ.

ಚಿತ್ರದುರ್ಗ ಜಿಲ್ಲೆಯಲ್ಲಿ ತೀವ್ರ ಬರಗಾಲದಿಂದಾಗಿ ಜನ ಮತ್ತು ಜಾನುವಾರುಗಳಿಗೆ ನೀರಿನ ಅಭಾವ ಉಂಟಾಗಿದೆ. ಕೊಳವೆಬಾವಿಗಳಲ್ಲಿ ನೀರಿನ ಪ್ರಮಾಣ ಗಣನೀಯವಾಗಿ ಕುಸಿಯುತ್ತಿದೆ. ಖಾಸಗಿ ಕೊಳವೆಬಾವಿ ಮಾಲೀಕರು ಹೆಚ್ಚು ಹಣಗಳಿಸುವ ಉದ್ದೇಶದಿಂದ, ನೀರು ಮಾರಾಟ ಮಾಡುವುದನ್ನು ನಿಷೇಧಿಸಲು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ನಿರ್ಣಯ ತೆಗೆದುಕೊಳ್ಳಲಾಗಿದೆ. ಖಾಸಗಿ ಕೊಳವೆ ಬಾವಿಗಳ ಮೂಲಕ ವಾಣಿಜ್ಯ ಉದ್ದೇಶಕ್ಕೆ ಕುಡಿಯುವ ನೀರು ಮಾರಾಟ ಮಾಡುವುದನ್ನು ನಿಷೇಧಿಸಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಆದೇಶ ಹೊರಡಿಸಿದ್ದಾರೆ.

ವಿಜಯನಗರ ಜಿಲ್ಲೆಯಲ್ಲಿ ಅನಧಿಕೃತ ಕೊಳವೆಬಾವಿಗಳು ಹಾಗೂ ವಿಫಲ ಕೊಳವೆಬಾವಿಗಳನ್ನು ಮುಚ್ಚಲು ಕೂಡಲೇ ಕ್ರಮಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ. ಗ್ರಾಮೀಣ ಪ್ರದೇಶದ ಜನರಿಗೆ ವಿಫಲವಾದ ಕೊಳವೆಬಾವಿಗಳನ್ನು ವ್ಯವಸ್ಥಿತವಾಗಿ ಮುಚ್ಚಲು ನಿರ್ದೇಶನ ನೀಡಬೇಕು ಮತ್ತು ಅವುಗಳನ್ನು ಮುಚ್ಚಿರುವ ಬಗ್ಗೆ ಪತ್ರದ ಮೂಲಕ ಖಾತ್ರಿಪಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

**<><*<><>*><>**

ಬಿಸಿಲಿನ ಬೇಗೆ ತೀವ್ರವಾಗಿರುವುದರಿಂದ ಜನರು ಆರೋಗ್ಯದ ಕಡೆಗೆ ಹೆಚ್ಚಿನ ನಿಗಾ ವಹಿಸಬೇಕು ಎಂದು ಬೆಳಗಾವಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸಲಹೆ ಮಾಡಿದ್ದಾರೆ. ಬೆಳಗಾವಿಯಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಆಯುಷ್ ಇಲಾಖೆಯ ವತಿಯಿಂದ ಆರೋಗ್ಯಕರ ಚಿಂಚಾ ಪಾನಕವನ್ನು ಸಾರ್ವಜನಿಕರು ಹಾಗೂ ಕರ್ತವ್ಯನಿರತ ಕಚೇರಿಯ ಸಿಬ್ಬಂದಿಗೆ ವಿತರಿಸಿ ಅವರು ಮಾತನಾಡಿದರು.

**<><*<><>*><>**

ಕನ್ನಡ ಚಿತ್ರರಂಗದ ಹಿರಿಯ ಹಾಸ್ಯನಟ, ನಿರ್ದೇಶಕ, ನಿರ್ಮಾಪಕ ದ್ವಾರಕೀಶ್ ಇಂದು ನಿಧನರಾಗಿದ್ದಾರೆ. ಅವರಿಗೆ ೮೧ ವರ್ಷ ವಯಸ್ಸಾಗಿತ್ತು. ಕಳೆದ ಕೆಲವು ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದರು. ೧೯೪೨ ರಲ್ಲಿ ಮೈಸೂರು ಜಿಲ್ಲೆ ಹುಣಸೂರಿನಲ್ಲಿ ಜನಿಸಿದ ಅವರು, ೬೦ರ ದಶಕದಲ್ಲಿ ಕನ್ನಡ ಚಿತ್ರರಂಗಕ್ಕೆ ಪದಾರ್ಪಣೆ ಮಾಡಿದ್ದರು. ಸುಮಾರು ೨೦೦ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿ ಮನೆ ಮಾತಾಗಿದ್ದಾರೆ. ಸಿನಿಮಾ ಜೀವನದಲ್ಲಿ ಹೆಚ್ಚಾಗಿ ಹಾಸ್ಯ ಕಲಾವಿದರಾಗಿಯೇ ಗುರುತಿಸಿಕೊಂಡಿದ್ದರು.

**<><*<><>*><>**

ಇರಾನ್‌ನಲ್ಲಿ ಸಿಲುಕಿರುವ ಭಾರತದ ಹಡಗು ಹಾಗೂ ಭಾರತೀಯರನ್ನು ಸುರಕ್ಷಿತವಾಗಿ ಕರೆ ತರಲು ಎಲ್ಲ ಪ್ರಯತ್ನ ಮಾಡಲಾಗುತ್ತಿದೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇಸ್ರೇಲ್ ಮತ್ತು ಇರಾನ್ ಪ್ರದೇಶಗಳಲ್ಲಿ ಲಕ್ಷಾಂತರ ಭಾರತೀಯರು ನೆಲೆಸಿದ್ದು, ಅವರ ಸುರಕ್ಷತೆ ಸರ್ಕಾರದ ಜವಾಬ್ದಾರಿಯಾಗಿದೆ ಎಂದು ಸಚಿವರು ಹೇಳಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**